ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 ದಿನಾಂಕ: 12–02–2019

ಪತ್ರಿಕಾ ಪ್ರಕಟಣೆ

# "ರಾಷ್ಟ್ರೀಯ ವಿಜ್ಞಾನ ದಿನಾಚರಣೆ" ಅಂಗವಾಗಿ ಲೇಖನ ಸ್ಪರ್ಧೆ

ಬೆಂಗಳೂರು, ಫೆಬ್ರವರಿ 12 (ಕರ್ನಾಟಕ ವಾರ್ತೆ)

ನೋಬೆಲ್ ಪ್ರಶಸ್ತಿ ವಿಜೇತ ಭಾರತದ ಹೆಮ್ಮೆಯ ವಿಜ್ಞಾನಿ ಸರ್. ಸಿ.ವಿ. ರಾಮನ್‌ರವರ ಪ್ರತಿಷ್ಠಿತ ಅನ್ವೇಷಣೆ "ರಾಮನ್ ಪರಿಣಾಮ" ವನ್ನು ಜಗತ್ತಿಗೆ ಘೋಷಿಸಿದ ದಿನವಾದ ಫೆಬ್ರವರಿ 28 ನ್ನು ಪ್ರತಿವರ್ಷ "ರಾಷ್ಟ್ರೀಯ ವಿಜ್ಞಾನ ದಿನಾಚರಣೆ" ಎಂದು ರಾಷ್ಟ್ರದಾದ್ಯಂತ ಆಚರಿಸಲಾಗುತ್ತದೆ.

ಈ ಹಿನ್ನೆಲೆಯಲ್ಲಿ 2019ರ ಫೆಬ್ರವರಿ 28 ರಂದು ರಾಷ್ಟ್ರೀಯ ವಿಜ್ಞಾನ ದಿನಾಚರಣೆಯನ್ನು ಭಾರತ ಸರ್ಕಾರ ನಿಗದಿಪಡಿಸಿದಂಥೆ "ಜನತೆಗಾಗಿ ವಿಜ್ಞಾನ, ವಿಜ್ಞಾನಕ್ಕಾಗಿ ಜನತೆ" (Science for the People and the People for Science) ಎಂಬ ಕೇಂದ್ರ ವಿಷಯದಡಿ ಆಚರಿಸಲಾಗುತ್ತಿದೆ. ಇದರ ಅಂಗವಾಗಿ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ ವತಿಯಿಂದ ವಿಜ್ಞಾನಾಸಕ್ತರಿಗೆ "ಜನತೆಗಾಗಿ ವಿಜ್ಞಾನ, ವಿಜ್ಞಾನಕ್ಕಾಗಿ ಜನತೆ" (Science for the People and the People for Science) ಎಂಬ ವಿಷಯ ಕುರಿತು ಲೇಖನ ಸ್ಪರ್ಧೆ ಆಯೋಜಿಸಲಾಗಿದೆ ಎಂದು ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಗೌರವ ಕಾರ್ಯದರ್ಶಿ ಗಿರೀಶ್ ಕಡ್ಲೇವಾಡ ಅವರು ತಿಳಿಸಿದ್ದಾರೆ.

ಆಸಕ್ತರು 1000 ಪದಗಳು ಮೀರದಂತೆ ಕಡ್ಡಾಯವಾಗಿ ಕನ್ನಡದಲ್ಲಿ ಲೇಖನ ಬರೆದು ಕಳುಹಿಸಬೇಕು. ಸ್ಪರ್ಧೆಯಲ್ಲಿ ಭಾಗವಹಿಸುವವರು ಲೇಖನದೊಂದಿಗೆ ತಮ್ಮ ಹೆಸರು, ಪೂರ್ಣ ವಿಳಾಸ ಮೊಬೈಲ್ ಸಂಖ್ಯೆ ಹಾಗೂ ಇ-ಮೇಲ್ ವಿವರಗಳನ್ನು ನಮೂದಿಸಬೇಕು. ವಿಜೇತರಿಗೆ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಹಾಗೂ ಭಾಗವಹಿಸಿದ ಎಲ್ಲರಿಗೂ ಅಭಿನಂದನಾ ಪತ್ರವನ್ನು ನೀಡಲಾಗುವುದು. ಲೇಖನಗಳನ್ನು ಫೆಬ್ರವರಿ 23 ರ ಒಳಗಾಗಿ ಗೌರವ ಕಾರ್ಯದರ್ಶಿ, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, "ವಿಜ್ಞಾನ ಭವನ" ನಂ 24/2, 21ನೇ ಮುಖ್ಯರಸ್ತೆ, ಬನಶಂಕರಿ 2ನೇ ಹಂತ, ಬೆಂಗಳೂರು – 560 070 ಈ ವಿಳಾಸಕ್ಕೆ ಪೋಸ್ಟ್ ಮೂಲಕ ಅಥವಾ ಇ-ಮೇಲ್ krvp.info@gmail.comಗೆ ಕಳುಹಿಸಬಹುದಾಗಿದೆ. ದೂರವಾಣಿ ಸಂಖ್ಯೆ 080-26718939, ಮೊಬೈಲ್ ಸಂಖ್ಯೆ 9483549159 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅರ್ಹ ಅಭ್ಯರ್ಥಿಗಳಿಂದ 10 ತಿಂಗಳ ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನ

ಬೆಂಗಳೂರು, ಫೆಬ್ರವರಿ 12 (ಕರ್ನಾಟಕ ವಾರ್ತೆ)

ತೊಟಗಾರಿಕೆ ಇಲಾಖೆಯಲ್ಲಿ ದಿನಾಂಕ: 02-05-2019 ರಿಂದ 29-02-2020 ರವರೆಗೆ ತೋಟಗಾರಿಕೆ ತರಬೇತಿ ಕೇಂದ್ರ ಲಾಲ್‌ಬಾಗ್. ಬೆಂಗಳೂರು ಇಲ್ಲಿ 2018-19 ನೇ ಸಾಲಿನ 10 (ಹತ್ತು) ತಿಂಗಳ ಅವಧಿಯ ತೋಟಗಾರಿಕೆ ತರಬೇತಿಗೆ ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ತುಮಕೂರು, ರಾಮನಗರ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಗಳಲ್ಲಿನ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ರೂ 1250/- ಗಳ ಮಾಸಿಕ ಶಿಷ್ಯವೇತನ ನೀಡಲಾಗುವುದು. ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ತುಮಕೂರು, ರಾಮನಗರ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಜಿಲ್ಲೆಗಳಲ್ಲಿ ವಾಸವಾಗಿರುವವರು ಮಾತ್ರ ಅರ್ಜಿ ಹಾಕಲು ಅರ್ಹರಾಗಿರುತ್ತಾರೆ.

ಅಭ್ಯರ್ಥಿಗಳು ಕನ್ನಡ ವಿಷಯಗಳೊಂದಿಗೆ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 33 ವರ್ಷ ಮತ್ತು ಇತರರಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 30 ವರ್ಷ.

ಈ ತರಬೇತಿಯು ರೈತರ ಮಕ್ಕಳಿಗಾಗಿ ಇರುವುದರಿಂದ ಅಭ್ಯರ್ಥಿ ತಂದೆ ಅಥವಾ ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು ಹಾಗೂ ಸ್ವಂತ ಸಾಗುವಳಿ ಮಾಡುತ್ತಿರಬೇಕು. ಈ ಬಗ್ಗೆ ಪಹಣಿ ನೀಡುವುದು ಕಡ್ಡಾಯವಾಗಿರುತ್ತದೆ.

ಅಭ್ಯರ್ಥಿಗಳು ತೋಟದ ಕೆಲಸಗಳನ್ನು ಮಾಡುವಷ್ಟು ಧೃಡಕಾಯರಾಗಿರಬೇಕು. ಅರ್ಜಿಗಳನ್ನು ಅಯಾ ಜಿಲ್ಲೆಯ ತೋಟಗಾರಿಕೆ ಉಪ ನಿರ್ದೇಶಕರು (ಜಿಲ್ಲಾ ಪಂಚಾಯತ್)/ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯ ವಲಯ)/ಅಥವಾ ಇಲಾಖೆ ವೆಬ್‌ಸೈಟ್ www/horticulture.kar.nic.in ನಲ್ಲಿ ದಿನಾಂಕ: 18-02-2019 ರಿಂದ ದಿನಾಂಕ: 28-02-2019 ಪಡೆಯಬಹುದಾಗಿರುತ್ತದೆ.

ಅರ್ಜಿ ಶುಲ್ಕ : ಸಾಮಾನ್ಯ ಅಭ್ಯರ್ಥಿಗಳಿಗೆ ರೂ 30 ಮತ್ತು ಪರಿಶಿಷ್ಟ ಜಾತಿ/ಪಂಗಡೆದ ಅಭ್ಯರ್ಥಿಗಳಿಗೆ ರೂ 15/- ಗಳ ಮೌಲ್ಯದ ಇಂಡಿಯನ್ ಪೋಸ್ಟಲ್ ಆರ್ಡರ್ (IPO) /ಡಿಮ್ಯಾಂಡ್ ಡ್ರಾಪ್ಟ್ (DD) ನ್ನು ಆಯಾಯ ಜಿಲ್ಲೆಗಳ ತೋಟಗಾರಿಕೆ ಉಪ ನಿರ್ದೇಶಕರು (ಜಿಲ್ಲಾ ಪಂಚಾಯತ್) ರವರೆ ಹೆಸರಿನಲ್ಲಿ ಪಡೆದು, ಅರ್ಜಿ ಜೊತೆಗೆ ಲಗತ್ತಿಸಬೇಕು.

ಅಭ್ಯರ್ಥಿಗಳನ್ನು ಸಂದರ್ಶನದ ಮುಖಾಂತರ ಆಯ್ಕೆ ಮಾಡಲಾಗುವುದು. ಸಂದರ್ಶನದ ದಿನಾಂಕ: 02-03-2019.

ಭರ್ತಿಮಾಡಿದ ಅರ್ಜಿಗಳನ್ನು ಸಂಬಂಧಿಸಿದ ದಾಖಲಾತಿಗಳೊಂದಿಗೆ ದಿನಾಂಕ: 28-02-2019 ಸಂಜೆ 5.30 ಗಂಟೆಯೊಳಗೆ ಆಯಾ ಜಿಲ್ಲೆಯ ತೋಟಗಾರಿಕೆ ಉಪನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಆಯಾಜಿಲ್ಲೆಯ ತೋಟಗಾರಿಕೆ ಉಪ ನಿರ್ದೇಶಕರ ಕಚೇರಿ ಮತ್ತು ತೋಟಗಾರಿಕೆ ತರಬೇತಿ ಕೇಂದ್ರ, ಲಾಲ್‌ಬಾಗ್, ಬೆಂಗಳೂರು ದೂರವಾಣಿ ಸಂಖ್ಯೆ 080-26564538 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ವಿಶೇಷ ಸಾಧನೆ ಮಾಡಿದ ಅಸಂಘಟಿತ ಕಾರ್ಮಿಕರಿಗೆ "ಕಾರ್ಮಿಕರ ಸಮ್ಮಾನ ಪ್ರಶಸ್ತಿ" ಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಫೆಬ್ರವರಿ 12 (ಕರ್ನಾಟಕ ವಾರ್ತೆ)

2018-19ನೇ ಸಾಲಿನ ಆಯವ್ಯದಲ್ಲಿ **"ಅಸಂಘಟಿತ ಕಾರ್ಮಿಕರನ್ನು ಕೇಂದ್ರವಾಗಿಟ್ಟುಕೊಂಡು, ಮಾರ್ಚ್ 1 ರಂದು ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಕಾರ್ಮಿಕ ಸಮ್ಮಾನ ದಿನ ಆಚರಣೆ ಮಾಡಲು ಹಾಗೂ ಅಸಂಘಟಿತ ವಲಯದಲ್ಲಿ ವಿಶೇಷ ಸಾಧನೆ ಮಾಡಿದ ಕಾರ್ಮಿಕರಿಗೆ ಕಾರ್ಮಿಕರ ಸಮ್ಮಾನ ಪ್ರಶಸ್ತಿ ನೀಡುವುದಾಗಿ"** ಘೋಷಿಸಿದೆ.

ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಲ್ಲಿ ನೋಂದಾಯಿಸಿಕೊಂಡ ಅಸಂಘಟಿತ ವಲಯಗಳಾದ ಕ್ಷೌರಿಕರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಮಂಡಕ್ಕಿ ಭಟ್ಟಿ ಕಾರ್ಮಿಕರು, ಹಮಾಲಿಗಳು, ಚಿಂದಿ ಆಯುವವರು, ಗೃಹ ಕೆಲಸಗಾರರು, ದರ್ಜಿಗಳು, ಮೆಕ್ಯಾನಿಕ್‌ಗಳು, ಅಗಸರು, ಕಟ್ಟಡ ಕಾರ್ಮಿಕರು, ಖಾಸಗಿ ವಾಣಿಜ್ಯ ವಾಹನ ಚಾಲಕರು ಇವರುಗಳಿಗೆ ಶ್ರಮ ಸಮ್ಮಾನ ಹಾಗೂ ವಿಶೇಷ ಪುರಸ್ಕಾರವನ್ನು

ನೀಡಲು ಕಾರ್ಮಿಕ ಇಲಾಖೆವತಿಯಿಂದ ಯೋಜನೆಯನ್ನು ರೂಪಿಸಲಾಗಿದ್ದು, ಅಸಂಘಟಿತ ವಲಯದ ಅರ್ಹ ಕಾರ್ಮಿಕರಿಂದ ಅರ್ಜಿ ಆಹ್ವಾನಿಸಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸಂಬಂಧಿಸಿದಂತೆ, ಬೆಂಗಳೂರಿನ ಕಾರ್ಮಿಕ ಭವನದಲ್ಲಿನ ಕಾರ್ಮಿಕ ಅಧಿಕಾರಿಯವರ ಕಛೇರಿ, ಉಪವಿಭಾಗ-5, ಬೆಂಗಳೂರು, ಕಾರ್ಮಿಕ ನಿರೀಕ್ಷಕರು, ದೇವನಹಳ್ಳಿ, ದೊಡ್ಡಬಳ್ಳಾಪುರ, ನೆಲಮಂಗಲ ಹಾಗೂ ಹೊಸಕೋಟೆ ಕಛೇರಿಗಳಲ್ಲಿ ಅರ್ಜಿಯನ್ನು ಪಡೆದು, ದಿನಾಂಕ : 18.02.2019 ರೊಳಗಾಗಿ ಮೇಲಿನ ಕಛೇರಿಗಳಲ್ಲಿ ಭರ್ತಿಮಾಡಿದ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ವೆಬ್‌ಸೈಟ್ www.labour.kar.nic.in ನ್ನು ಹಾಗೂ ಇಲಾಖೆಯ ದೂರವಾಣಿ ಸಂಖ್ಯೆಗಳು : 080 – 26086236, 26086269, 26086270, 26086221, 26086107, 26086310 ಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ವಿಧಾನ ಪರಿಷತ್ ಕಲಾಪಗಳು

ಬೆಂಗಳೂರು, ಫೆಬ್ರವರಿ 12 (ಕರ್ನಾಟಕ ವಾರ್ತೆ)

ವಿಧಾನ ಪರಿಷತ್ ಸದಸ್ಯರಾದ ನಿರಾಣಿ ಹನುಮಂತ ರುದ್ರಪ್ಪ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಜಲಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್, ಕೃಷ್ಣ ಮೇಲ್ದಂಡೆ ಯೋಜನೆಯಡಿಯಲ್ಲಿ 137 ಪುನರ್ವಸತಿ ಕೇಂದ್ರ ನಿರ್ಮಿಸಲಾಗಿದ್ದು, ಅದರಲ್ಲಿನ 107 ಕೇಂದ್ರಗಳಿಗೆ ಸಂತ್ರಸ್ಥರು ಸ್ಥಳಾಂತರಗೊಂಡಿರುತ್ತಾರೆ. ಸದರಿ ಕೇಂದ್ರಗಳಿಗೆ ಮೂಲಭೂತ ಸೌಲಭ್ಯ ಒದಗಿಸುವ ಸಲುವಾಗಿ 325.34 ಕೋಟಿ ರೂ. ಗಳ ವಿಶೇಷ ಅನುದಾನ ನಿಗದಿಪಡಿಸಲಾಗಿದೆ ಎಂದರು.

ಜೊತೆಗೆ ಕೃಷ್ಣಾ ಮೇಲ್ದಂಡೆ ಯೋಜನೆಯಡಿಯಲ್ಲಿ ಮನೆ ಕಳೆದುಕೊಂಡ ಸಂತ್ರಸ್ಥರಿಗೆ ನಿವೇಶನಗಳನ್ನು ಹಂಚಿಕೆ ಮಾಡಲಾಗಿದ್ದು, ಮುಂದೆ ಆಲಮಟ್ಟಿ

ಡ್ಯಾಂ ಎತ್ತರಿಸಬೇಕಾದ ಸಂದರ್ಭ, ಪ್ರವಾಹ ಸಂದರ್ಭದಲ್ಲಿ ಬಾಧಿತರಾಗಬಹುದಾದ ಸಂತ್ರಸ್ಥರಿಗೂ ಸಹ ಆದ್ಯತೆ ಮೇರೆಗೆ ನಿವೇಶನ ಹಂಚಿಕೆ ಮಾಡಲಾಗುವುದು ಎಂದರು.

ಎನ್.ಎಸ್. ಬೋಸ್‌ರಾಜು ಅವರು ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಸಚಿವರು, ತುಂಗಭದ್ರಾ ಜಲಾಶಯದ ಹೂಳಿನಿಂದ ಉಂಟಾಗಿರುವ ನೀರಿನ ಕೊರತೆಯನ್ನು ಸರಿದೂಗಿಸಲು 2018-19 ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ಗಂಗಾವತಿ ತಾಲ್ಲೂಕಿನ ನವಲಿ ಗ್ರಾಮದ ಹತ್ತಿರ ಸಮತೋಲನ ಜಲಾಶಯ ನಿರ್ಮಿಸಿ ಮಳೆಗಾಲದಲ್ಲಿ ಪ್ರವಾಹ ನಾಲೆ ಮೂಲಕ ನೀರನ್ನು ಶೇಖರಿಸುವ ಪ್ರಸ್ತಾವನೆಯನ್ನು ತುಂಗಭದ್ರಾ ಮಂಡಳಿಗೆ ಸಲ್ಲಿಸಿದ್ದು ಮಂಡಳಿಯ ಪರಿಶೀಲನೆ ನಂತರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು.

ನಾರಾಯಣಪುರ ಬಲದಂಡೆ ಕಾಲುವೆ ವಿಸ್ತರಣೆ ಪ್ರಸ್ತುತ 95 ಕಿಮೀ ನಿಂದ 130 ಕಿ.ಮೀ ವರೆಗೆ ಕಾಮಗಾರಿ ಪೂರ್ಣಗೊಂಡಿದ್ದು ಅದನ್ನು 168 ಕಿ.ಮೀ ವರೆಗೆ ವಿಸ್ತರಿಸುವ ಕಾಮಗಾರಿಯನ್ನು ಕೈಗೆತ್ತಿಕೊಂಡಿದ್ದು ಕೆಲಸ ಪ್ರಗತಿಯಲ್ಲಿರುತ್ತದೆ. ಮುಂದುವರೆದು ನಾರಾಯಣಪುರ ಬಲದಂಡೆ ಮುಖ್ಯ ಕಾಲುವೆ 130 ರಿಂದ 168.50 ಕಿ.ಮಿ. ವರೆಗೆ ನಿರ್ಮಾಣದ ಕಾರ್ಯ ಕೈಗೆತ್ತಿಕೊಂಡಿದ್ದು, ಇದರ ಪ್ರಗತಿ ವಿವಿಧ ಹಂತದಲ್ಲಿರುತ್ತದೆ. ಜೊತೆಗೆ ಕೃಷ್ಣಾ ನದಿಪಾತ್ರದಿಂದ ಗಣೇಕಲ್ ಜಲಾಶಯಕ್ಕೆ ನೀರು ತುಂಬಿಸುವ ಯೋಜನೆಯನ್ನು 2019-20 ನೇ ಸಾಲಿನ ಆಯವ್ಯಯದ ಭಾಷಣದಲ್ಲಿ ಘೋಷಣೆ ಮಾಡಲಾಗಿರುತ್ತದೆ ಎಂದರು.

ಹರೀಶ್‌ಕುಮಾರ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಗ್ರಾಮೀಣಾಭಿವೃವದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರಾದ ಕೃಷ್ಣ ಬೈರೇಗೌಡ ಅವರು ದಕ್ಷಿಣ ಕನ್ನಡ ಜಿಲ್ಲೆಯ ವ್ಯಾಪ್ತಿಯ ಗ್ರಾಮೀಣ ಜನವಸತಿಗಳ ನೀರು ಶುದ್ಧೀಕರಣ ಘಟಕಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ 2016-17,2018-19ರಲ್ಲಿ ಬಿಡುಗಡೆಯಾದ ಒಟ್ಟು ಮೊತ್ತ 1064.336 ಲಕ್ಷ ರೂ ಆಗಿದ್ದು, ಇದರಲ್ಲಿ 766.99 ಲಕ್ಷ ರೂ ಅನುದಾನವನ್ನು ಖರ್ಚುಮಾಡಲಾಗಿದೆ. ಪ್ರಸ್ತುತ ದಕ್ಷಿಣ ಕನ್ನಡ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ 115 ನೀರು ಶುದ್ಧೀಕರಣ ಘಟಕಗಳಿದ್ದು,

ಇವುಗಳಲ್ಲಿ 87 ಘಟಕಗಳು ಸುಸ್ಥಿತಿಯಲ್ಲಿದ್ದು, ಉಳಿದ 28 ಘಟಕಗಳನ್ನು ಸುಸ್ಥಿಯಲ್ಲಿಡಲು ಟಾಸ್ಟ್ ಫೋರ್ಸ್ ಎನ್.ಆರ್.ಡಿ.ಡಬ್ಲ್ಯೂಪಿ ಹಾಗೂ ಇತರ ಅನುದಾನ ಬಳಸಿ ಸುಸ್ಥಿತಿಯಲ್ಲಿಡಲು ಸೂಚಿಸಲಾಗಿದೆ ಎಂದರು.

ರಘುನಾಥ್ ರಾವ್ ಮಲ್ಕಾಪುರೆ ರವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಗ್ರಾಮೀಣಾಭಿವೃದ್ಧಿ ಸಚಿವರು ಬೀದರ್ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ 434 ನೀರು ಶುದ್ಧೀಕರಣ ಘಟಕಗಳನ್ನು ಸ್ಥಾಪಿಸಲು ಕ್ರಮವಹಿಸಲಾಗಿದ್ದು, ಅದರಲ್ಲಿ 284 ಘಟಕಗಳನ್ನು ಅಳವಡಿಸಿದ್ದು, ಉಳಿದ 150 ಘಟಕಗಳ ಪ್ರಗತಿ ವಿವಿಧ ಹಂತದಲ್ಲಿರುತ್ತದೆ ಎಂದರು.

ಆರ್. ಪ್ರಸನ್ನಕುಮಾರ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಗ್ರಾಮೀಣಾಭಿವೃದ್ಧಿ ಸಚಿವರು 2018-19 ನೇ ಸಾಲಿನಲ್ಲಿ ನರೇಗಾ ಯೋಜನೆ ಅನುಷ್ಠಾನಕ್ಕೆ ವೆಚ್ಚ ಮಾಡಲು 3739.15 ಕೋಟಿ ರೂ. ಅನುದಾನದ ಕೂಲಿ ಆಯವ್ಯಯಕ್ಕೆ ಕೇಂದ್ರ ಸರ್ಕಾರ ಅನುಮೋದನೆ ನೀಡಿರುತ್ತದೆ. 2018-19ನೇ ಸಾಲಿನಲ್ಲಿ ರಾಜ್ಯ ಸರ್ಕಾರ 156 ತಾಲ್ಲೂಕುಗಳನ್ನು ಬರಪೀಡಿತವೆಂದು ಘೋಷಣೆ ಮಾಡಿದ್ದು, ಶಿವಮೊಗ್ಗ ಜಿಲ್ಲೆಯ ಭದ್ರಾವತಿ, ಶಿಕಾರಿಪುರ, ಶಿವಮೊಗ್ಗ ಮತ್ತು ಸೊರಬ ತಾಲ್ಲೂಕು ಸೇರಿರುತ್ತವೆ. ನರೇಗಾ ಯೋಜನೆಯಡಿ ಕೂಲಿ ಉದ್ಯೋಗ ಕೋರುವ ಪ್ರತಿ ಕುಟುಂಬಕ್ಕೆ ಹೆಚ್ಚುವರಿಯಾಗಿ 50 ಮಾನವ ದಿನಗಳು (ಒಟ್ಟಾರೆ 150 ದಿವಸ) ಹೆಚ್ಚುವರಿಯಾಗಿ ಬೇಡಿಕೆ ಆಧಾರದ ಮೇಲೆ ನೀಡಲಾಗುತ್ತದೆ.

ಕೂಲಿ ಬೇಡಿಕೆಯನ್ನು ಹೆಚ್ಚಿಸಲು ಉದ್ಯೋಗ ಚೀಟಿದಾರರ ಸಂಘಟನೆ ಮೂಲಕ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಕೂಲಿಕಾರರಿಗೆ ಸಕಾಲದಲ್ಲಿ ಕೂಲಿ ವೇತನ ಪಾವತಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಕೇಂದ್ರ ಸರ್ಕಾರದ ನಿರ್ದೇಶನದನ್ವಯ ಗ್ರಾಮ ಪಂಚಾಯತ್ ಸದಸ್ಯರಿಗೆ ಅಕುಶಲ ಕಾರ್ಮಿಕರಾಗಿ ಕೆಲಸ ನಿರ್ವಹಿಸಲು ಅವಕಾಶವಿರುವುದಿಲ್ಲ. ಹಾಗಾಗಿ ಅವರಿಗೆ ಉದ್ಯೋಗ ಕೊಡುವುದನ್ನು ನಿಲ್ಲಿಸಲಾಗಿದೆ. ಈ ಸಂಬಂಧ ಸರ್ಕಾರ ಪುನರ್ ಪರಿಶೀಲನೆ ಮಾಡಲು ತೀರ್ಮಾನಿಸಿದೆ ಎಂದರು.